ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೮**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

**ಬುಧವಾರ, ದಿನಾಂಕ: ೩೦ನೇ ನವೆಂಬರ್, ೨೦೧೬**

---

**ಸಮೂಹ – III**

೧. ಅರಣ್ಯ ಸಚಿವರು.
೨. ಕಂದಾಯ ಸಚಿವರು.
೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.
೪. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.
೫. ಕಾರ್ಮಿಕ ಸಚಿವರು.
೬. ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು.
೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು.

---

## ಅಂತ್ಯಕ್ರಿಯೆಗೆ ಸಹಾಯಧನ ಹೆಚ್ಚಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೦೬ (೯೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಬಡ ಕುಟುಂಬದ ಸದಸ್ಯರು ಮೃತರಾದಾಗ ಅವರ ಅಂತ್ಯಕ್ರಿಯೆ ಮಾಡಲು ಸಹಾಯಧನವನ್ನು ಮಂಜೂರು ಮಾಡುವ ಯೋಜನೆಯು ಜಾರಿಯಲ್ಲಿದೆಯೇ ; ಈ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ ; ಇದರ ಉದ್ದೇಶವೇನು ; (ವಿವರ ನೀಡುವುದು)

(ಆ) ಈ ಯೋಜನೆಯ ಸಹಾಯಧನವನ್ನು ಹೆಚ್ಚಳ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಹಿಂದೆ ಇದ್ದ ಮೊತ್ತವೆಷ್ಟು ; ಇದನ್ನು ಕಳೆದ ಮೂರು ವರ್ಷಗಳಲ್ಲಿ ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ ; ಹೆಚ್ಚಳವಾದ ಮೊತ್ತ ಎಷ್ಟು ; ಇದನ್ನು ಈವರೆಗೆ ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ ; (ಗ್ರಾಮ ಪಂಚಾಯತಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಫಲಾನುಭವಿಗಳನ್ನು ಗುರುತಿಸಲು ಇರುವ ಮಾನದಂಡಗಳೇನು ; ಇದನ್ನು ಸೂಕ್ತ ಫಲಾನುಭವಿಗಳಿಗೆ ಯಾರು ತಲುಪಿಸುತ್ತಾರೆ ? (ಅರ್ಹ ಫಲಾನುಭವಿಗಳ ವಿವರ ನೀಡುವುದು)

## ವರಾಹಿ ಯೋಜನೆಯನ್ನು ಪೂರ್ಣಗೊಳಿಸಲು ಅಗತ್ಯವಾದ ಅನುದಾನದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭ (೯೩೪) ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ನೀರಾವರಿ ಯೋಜನೆಗೆ ನೂತನ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಒದಗಿಸಲಾದ ಅನುದಾನ ಮತ್ತು ವೆಚ್ಚವಾದ ಅನುದಾನವೆಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಈ ಯೋಜನೆಯನ್ನು ಪೂರ್ಣಗೊಳಿಸುವಲ್ಲಿ ಇನ್ನು ಮುಂದಿನ ಅವಧಿಗೆ ಒಟ್ಟು ಅಂದಾಜಿಸಿರುವ ವೆಚ್ಚದ ಪ್ರಮಾಣವೆಷ್ಟು ; ಎಡದಂಡೆ, ಬಲದಂಡೆ ಹಾಗೂ ಏತ ನೀರಾವರಿ ಸೇರಿದಂತೆ ಪ್ರತ್ಯೇಕ ವಿವರ ನೀಡುವುದು ;

(ಇ) ಈ ಯೋಜನೆಯನ್ನು ಪೂರ್ಣಗೊಳಿಸಲು ಸ್ವಾಧೀನಪಡಿಸಲಾದ ಒಟ್ಟು ಭೂ ಪ್ರಮಾಣವೆಷ್ಟು ;

(ಈ) ಈ ಯೋಜನೆಯನ್ನು ಪೂರ್ಣಗೊಳಿಸಲು ಇಲಾಖೆಗೆ ನಿಗಧಿಪಡಿಸಲಾದ ಕಾಲಮಿತಿ ಯಾವುದು ?

## ನಗರ ಪ್ರದೇಶದಲ್ಲಿ ನೇಕಾರಿಕೆ ಮಗ್ಗಗಳನ್ನು ನಿಲ್ಲಿಸುತ್ತಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೦೮ (೯೪೫) ಮಾನ್ಯ ಜವಳಿ ಮತ್ತು ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷದಿಂದ ರಾಜ್ಯದ ಎಲ್ಲಾ ನಗರಗಳಲ್ಲಿ ವಿದ್ಯುತ್ ಚಾಲಿತ ಮಗ್ಗಗಳನ್ನು ನಡೆಸಬಾರದೆಂದು ಆದೇಶ ಮಾಡಲಾಗಿದೆಯೆ ;

(ಆ) ಹಾಗಿದ್ದಲ್ಲಿ, ಎಲ್ಲಾ ನಗರ ಪ್ರದೇಶಗಳಲ್ಲಿ ನವೀಕರಣ ಮಾಡದಿರಲು ಕಾರಣವೇನು;

(ಇ) ಈ ಬಗ್ಗೆ ಸದನ ಸಮಿತಿಯು ವರದಿ ನೀಡಿದ್ದು ನೇಕಾರರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ವರದಿಯ ಆಧಾರದ ಮೇಲೆ ನಗರಾಭಿವೃದ್ಧಿ ಇಲಾಖೆ, ಪರಿಸರ ಇಲಾಖೆಗಳಿಗೆ ಪತ್ರ ವ್ಯವಹಾರ ಮಾಡಿ ನೇಕಾರರಿಗೆ ೩ ವರ್ಷದಿಂದ ತೊಂದರೆ ಅನುಭವಿಸುತ್ತಿರುವವರಿಗೆ ಏನು ಕ್ರಮ ಕೈಗೊಳ್ಳಲಾಗಿದೆ ;

(ಉ) ಯಾವಾಗ ಸರಿಪಡಿಸಿ ನೇಕಾರರಿಗೆ ಅನುಕೂಲ ಮಾಡಿಕೊಡಲಾಗುವುದು ?

## ರಾಯಚೂರು ಜಿಲ್ಲೆಯಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೯ (೧೦೨೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸಲು ಹಾಗೂ ರೈತರಿಗೆ ಪ್ರೋತ್ಸಾಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿರುವ ಮಾವಿನ ಕೆರೆ ಪಕ್ಕದಲ್ಲಿರುವ ಫಿಶ್ ಟ್ಯಾಂಕ್ (Fish Tank) ನಿರುಪಯೋಗವಾಗಿರುವುದನ್ನು ನಗರಸಭೆಗೆ ಒಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕೆರೆ ಅಭಿವೃದ್ಧಿ ಪ್ರಾಧಿಕಾರದಲ್ಲಿನ ಹುದ್ದೆಗಳು ಖಾಲಿ ಇರುವುದರಿಂದಾಗಿ ಪ್ರಾಧಿಕಾರಕ್ಕೆ ಸಮರ್ಪಕವಾಗಿ ಕಾರ್ಯ ನಿರ್ವಹಿಸಲು ಸಾಧ್ಯವಾಗುತ್ತಿಲ್ಲದಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೧೦ (೧೦೫೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೆರೆ ಅಭಿವೃದ್ಧಿ ಪ್ರಾಧಿಕಾರವು ಯಾವಾಗ ಸ್ಥಾಪಿತವಾಯಿತು ;

(ಆ) ಸದರಿ ಪ್ರಾಧಿಕಾರದಲ್ಲಿ ಎಷ್ಟು ವಿಭಾಗಗಳು ಬರುತ್ತವೆ ; ಇವುಗಳ ಕಾರ್ಯ ವ್ಯಾಪ್ತಿಯ ಕುರಿತು ವಿವರಿಸುವುದು ;

(ಇ) ಈ ಪ್ರಾಧಿಕಾರದ ಯಾವ ಯಾವ ವಿಭಾಗಗಳಿಗೆ ಎಷ್ಟು ಹುದ್ದೆಗಳು ಮಂಜೂರಾಗಿರುತ್ತವೆ ; (ವಿವರ ನೀಡುವುದು) ಇದರಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; ಪ್ರಭಾರಿ ಹುದ್ದೆಗಳು ಎಷ್ಟು ; ಭರ್ತಿಯಾಗಿರುವ ಹುದ್ದೆಗಳ ಎಷ್ಟು ; (ವಿವರ ನೀಡುವುದು)

(ಈ) ಕೆರೆ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಎಷ್ಟು ಕೆರೆಗಳು ಬರುತ್ತವೆ ;

(ಉ) ಪ್ರಾಧಿಕಾರದ ಮೂಲ ಉದ್ದೇಶ ಹಾಗೂ ಕಾರ್ಯ ಚಟುವಟಿಕೆಗಳೇನು ? (ವಿವರ ನೀಡುವುದು)

## ಬಗರ್ ಹುಕುಂ ಯೋಜನೆಯಲ್ಲಿ ಅಕ್ರಮ ಭೂ ಮಂಜೂರಾತಿ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೧ (೯೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಉತ್ತರ ತಾಲ್ಲೂಕಿನ (ಅಪರ ಯಲಹಂಕ) ಬಗರ್ ಹುಕುಂ ಭೂ ಮಂಜೂರಾತಿ ಸಮಿತಿ ಹಾಗೂ ಅಧಿಕಾರಿಗಳಿಂದ ಕಾನೂನು ಬಾಹಿರವಾಗಿ ಭೂ ಮಂಜೂರಾತಿ (ನಮೂನೆ–೫೩ ರ ಅರ್ಜಿ ಮೇರೆಗೆ) ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಇ) ಬೆಂಗಳೂರು ಉತ್ತರ ತಾಲ್ಲೂಕು (ಅಪರ ಯಲಹಂಕ), ಹೆಸರುಘಟ್ಟ ಹೋಬಳಿ, ಕಡತನಮಲೆ ಗ್ರಾಮದ ಸರ್ವೆ ನಂ. ೫೯ರಲ್ಲಿ ಕಾನೂನುಬಾಹಿರವಾಗಿ ಬಗರ್ ಹುಕುಂ ಭೂ ಮಂಜೂರಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಕಾನೂನುಬಾಹಿರ ಮಂಜೂರಾತಿಯನ್ನು ರದ್ದುಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಾಗದ ರಹಿತ ಆಡಳಿತದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೨ (೧೦೬೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಯಾವ ಜಿಲ್ಲೆಗಳಲ್ಲಿ ಹಾಗೂ ತಾಲ್ಲೂಕುಗಳಲ್ಲಿ ಆಡಳಿತವನ್ನು ಪಾರದರ್ಶಕವಾಗಿಸಲು ಕಾಗದ ರಹಿತ ಕಛೇರಿ ವ್ಯವಸ್ಥೆ ಜಾರಿಗೆ ಬಂದಿದೆ ;

(ಆ) ಇದರಿಂದಾಗಿ ರೈತರಿಗೆ ಹೆಚ್ಚಿನ ಉಪಯೋಗವಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ರಾಜ್ಯದ ಎಷ್ಟು ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮವನ್ನಾಗಿ ಮಾಡಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಬಾಕಿ ಇರುವ ಪೋಡಿ ಪ್ರಕರಣಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಹಾಗಿದ್ದಲ್ಲಿ, ಬಾಕಿ ಇರುವ ಪೋಡಿ ಪ್ರಕರಣಗಳನ್ನು ಎಷ್ಟು ಕಾಲಾವಧಿಯೊಳಗೆ ಪೂರ್ಣಗೊಳಿಸಲಾಗುವುದು ?

## ರಾಜ್ಯದ ಜಿಲ್ಲಾ ಹಾಗೂ ಉಚ್ಛ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಮೊಕದ್ದಮೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೧೩ (೯೨೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಜಿಲ್ಲಾ ಹಾಗೂ ಉಚ್ಛ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಮೊಕದ್ದೆಮಗಳಲ್ಲಿ ಸರ್ಕಾರವೇ ವಾದಿ ಅಥವಾ ಪ್ರತಿವಾದಿಯಾಗಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು ;

(ಇ) ಸಾರ್ವಜನಿಕರಿಗೆ ಶೀಘ್ರ ನ್ಯಾಯ ಒದಗಿಸಲು ಹಮ್ಮಿಕೊಂಡಿರುವ "ಲೋಕ್–ಅದಾಲತ್" ನಂತೆ ದೊಡ್ಡ ಸಂಖ್ಯೆಯಲ್ಲಿ ಸರ್ಕಾರ ಭಾಗಿಯಾಗಿರುವ ಮೊಕದ್ದಮೆಗಳನ್ನು ಶೀಘ್ರ ಬಗೆಹರಿಸಲು ಅನುಕೂಲವಾಗುವಂತೆ ಈ ಮೊಕದ್ದಮೆಗಳಿಗಾಗಿ ಸರ್ಕಾರ ಮತ್ತು ನ್ಯಾಯಾಲಯಗಳ ಸಹಭಾಗಿತ್ವದಲ್ಲಿ ಸರ್ಕಾರಿ ಮೊಕದ್ದಮೆಗಳಿಗಾಗಿ ವಿಶೇಷ "ಲೋಕ–ಅದಾಲತ್" ಹಮ್ಮಿಕೊಂಡು ಶೀಘ್ರ ಪರಿಹಾರ ಒದಗಿಸಲು ಹಾಗೂ ನ್ಯಾಯಾಲಯದ ಹೊರೆ ಕಡಿಮೆ ಮಾಡಲು ಸರಕಾರ ಯೋಜನೆಗಳನ್ನು ಹಮ್ಮಿಕೊಳ್ಳುವುದೇ ?

## ಬೀದರ್ ಜಿಲ್ಲೆಯ ಸಣ್ಣ ಕೆರೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧ಳ (೧೧೫೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿರುವ ಒಟ್ಟು ಸಣ್ಣ ಕೆರೆಗಳ ಸಂಖ್ಯೆ ಎಷ್ಟು ;

(ಆ) ಈ ಕೆರೆಗಳ ಅಭಿವೃದ್ಧಿಗಾಗಿ ಕಳೆದ ಎರಡು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹೊಸ ಸಣ್ಣ ಕೆರೆಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಕೆರೆಗಳ ನಿರ್ಮಾಣ ಯಾವಾಗಿನಿಂದ ಪ್ರಾರಂಭವಾಗುವುದು ; ಈ ಕೆರೆಗಳಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಹೊಸ ಕೆರೆ ನಿರ್ಮಾಣಕ್ಕಾಗಿ ಬಂದ ಮನವಿಯನ್ನು ಪರಿಗಣಿಸಲಾಗಿದೆಯೇ ; ಬಂದಿದ್ದರೆ, ವಿವರ ನೀಡುವುದು ?

## ಚಿಕ್ಕಮಗಳೂರು ಜಿಲ್ಲೆಯ ತಾಲ್ಲೂಕುವಾರು ಕಂದಾಯ ಭೂಮಿಯನ್ನು ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸಿರುವ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೫ (೯೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯ ತಾಲ್ಲೂಕುವಾರು ಕಂದಾಯ ಭೂಮಿಯನ್ನು ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸಲು ಸರ್ಕಾರಕ್ಕೆ ಆಯಾ ತಾಲ್ಲೂಕಿನ ತಹಶೀಲ್ದಾರರು ಶಿಫಾರಸ್ಸು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜನವಸತಿ ಪ್ರದೇಶದ ಸರ್ವೆ ನಂಬರ್‌ನಲ್ಲಿ ಉಳಿದ ಭೂಮಿಯನ್ನು ಡೀಮ್ಡ್ ಫಾರೆಸ್ಟ್ ಎಂದು ಶಿಫಾರಸ್ಸು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರದ ಗಮನಕ್ಕೆ ಬಂದಿದ್ದಲ್ಲಿ, ಅಂತಹ ಭೂಮಿಯನ್ನು ಕಂದಾಯ ಇಲಾಖೆಯಲ್ಲಿಯೇ ಉಳಿಸಿಕೊಳ್ಳಲು ಸರ್ಕಾರ ತೀರ್ಮಾನಿಸಿದೆಯೇ ;

(ಈ) ಮೂಡಿಗೆರೆ ತಾಲ್ಲೂಕಿನಲ್ಲಿ ಎಷ್ಟು ಭೂಮಿಯನ್ನು ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸುವಂತೆ ಶಿಫಾರಸ್ಸು ಮಾಡಲಾಗಿದೆ ?

## ಅನುದಾನಿತ ಐ.ಟಿ.ಐ. ಸಿಬ್ಬಂದಿಗಳ ವೇತನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೧೬ (೧೦೨೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನಿತ ಐ.ಟಿ.ಐ. ಕಾಲೇಜುಗಳ ಸಿಬ್ಬಂದಿಗಳ ವೇತನ ಪ್ರತಿ ತಿಂಗಳು ಸಮಯಕ್ಕೆ ಸರಿಯಾಗಿ ಆಗುತ್ತಿದೆಯೇ ;

(ಆ) ಇವರ ವೇತನ ಬಟವಾಡೆಯನ್ನು ಹೇಗೆ ಮಾಡಲಾಗುತ್ತಿದೆ ;

(ಇ) ಇವರುಗಳ ಅರಿಯರ್ಸ್, ಸರೆಂಡರ್, ವೈದ್ಯಕೀಯ ವೆಚ್ಚ ಮರುಪಾವತಿ ಇತ್ಯಾದಿಗಳನ್ನು ಸಮಯಕ್ಕೆ ಸರಿಯಾಗಿ ಮಾಡಲಾಗುತ್ತಿದೆಯೇ ; ಈ ನಿಟ್ಟಿನಲ್ಲಿ ಅಳವಡಿಸಿಕೊಂಡಿರುವ ನಿಯಮ ಏನು ; ೨೦೧೫–೧೬ರ ಬಾಬ್ತಿನಲ್ಲಿ ಆದ ಹಣ ಸಂದಾಯದ ವಿವರ ನೀಡುವುದು ;

(ಈ) ಇವರ ವೇತನವನ್ನು ಪ್ಲಾನ್‌ನಿಂದ ನಾನ್ ಪ್ಲಾನ್ ಅಡಿಯಲ್ಲಿ ನೀಡಲು ಕ್ರಮ ಕೈಗೊಳ್ಳಲು ಇರುವ ತೊಂದರೆಗಳೇನು ; ಈ ಕುರಿತು ಸರ್ಕಾರದ ನಿಲುವೇನು ?

## ಆಲಮಟ್ಟಿ ಜಲಾಶಯದ ಮಟ್ಟವನ್ನು ಎತ್ತರಿಸುವ ಬಗ್ಗೆ

**ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೧೧೭ (೯೬೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷ್ಣಾ ಮೇಲ್ದಂಡೆ ಆಲಮಟ್ಟಿ ಜಲಾಶಯದ ಮಟ್ಟವನ್ನು ೫೧೯.೬ ಮೀಟರ್‌ನಿಂದ ೫೨೪ ಮೀಟರ್‌ಗೆ ಎತ್ತರಿಸುವ ಯೋಜನೆ ಯಾವ ಹಂತದಲ್ಲಿದೆ ;

(ಆ) ಈ ಯೋಜನೆಯಿಂದ ಎಷ್ಟು ಗ್ರಾಮಗಳು ಮುಳುಗಡೆಯಾಗಲಿದೆ ;

(ಇ) ಮುಳುಗಡೆಯಾಗುವ ಈ ಗ್ರಾಮಗಳಿಂದ ಎಷ್ಟು ಕುಟುಂಬಗಳನ್ನು ಸ್ಥಳಾಂತರಗೊಳಿಸಬೇಕಾಗುತ್ತದೆ ;

(ಈ) ಈ ಯೋಜನೆ ಅಡಿಯಲ್ಲಿ ಪುನರ್ ವಸತಿಗಾಗಿ ಕೈಗೊಳ್ಳಲಿರುವ ಕ್ರಮಗಳು ಯಾವ ಹಂತದಲ್ಲಿದೆ ?

## ಕಲಬುರಗಿಯಲ್ಲಿ ``ಟೆಕ್ಸ್‌ಟೈಲ್ ಪಾರ್ಕ್'' ಸ್ಥಾಪನೆಗೆ ರೈತರಿಂದ ಸ್ವಾಧೀನಪಡಿಸಿಕೊಂಡ ಜಮೀನು ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೧೮ (೧೦೧೭) ಮಾನ್ಯ ಜವಳಿ ಮತ್ತು ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿಯಲ್ಲಿ ``ಟೆಕ್ಸ್‌ಟೈಲ್ ಪಾರ್ಕ್'' ಸ್ಥಾಪನೆಗಾಗಿ ರೈತರಿಂದ ಸ್ವಾಧೀನಪಡಿಸಿಕೊಂಡ ಒಟ್ಟು ಜಮೀನು ಎಷ್ಟು ; ಯಾವ ಸಾಲಿನಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ; (ಸರ್ವೆ ನಂಬರ್‌ವಾರು ಹಾಗೂ ರೈತರ ಹೆಸರುಗಳ ಸಂಪೂರ್ಣ ವಿವರ ನೀಡುವುದು)

(ಆ) ಸ್ವಾಧೀನಪಡಿಸಿಕೊಂಡ ರೈತರ ಜಮೀನುಗಳಿಗೆ ಪ್ರತಿ ಎಕರೆಗೆ ನಿಗಧಿಪಡಿಸಿದ ಬೆಲೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಇಲ್ಲಿಯವರೆಗೆ ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ ಹಾಗೂ ಇನ್ನೂ ಎಷ್ಟು ರೈತರಿಗೆ ಪರಿಹಾರ ಪಾವತಿಸಬೇಕಾಗಿದೆ ; (ಸರ್ವೆ ನಂ. ಹಾಗೂ ರೈತರುಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಈ) ಸದರಿ ಟೆಕ್ಸ್‌ಟೈಲ್ ಪಾರ್ಕಿಗೆ ರೈತರ ಭೂಮಿ ಸ್ವಾಧೀನಪಡಿಸಿಕೊಂಡು ೫ ವರ್ಷ ಕಳೆದರು ರೈತರಿಗೆ ಪರಿಹಾರ ಪಾವತಿಸದೆ ಇರುವುದಕ್ಕೆ ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಉ) ಈ ಯೋಜನೆಗೆ ಇಲ್ಲಿಯವರೆಗೆ ಸರ್ಕಾರದಿಂದ ಬಿಡುಗಡೆಯಾದ ಮೊತ್ತ ಎಷ್ಟು ಹಾಗೂ ಯಾವ ಯಾವ ಬಾಬ್ತುಗಳಿಗೆ ನೀಡಲಾಗಿದೆ ? (ಮಾಹಿತಿ ನೀಡುವುದು)

## ಧಾರವಾಡದಲ್ಲಿ ತಡಹಾಳ ಗ್ರಾಮ ಪಂಚಾಯತ್ ವ್ಯಾಪ್ತಿಯ ಗ್ರಾಮಗಳಿಗೆ ಮೂಲ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೯ (೯೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಧಾರವಾಡ ಜಿಲ್ಲೆಯ ತಡಹಾಳ ಗ್ರಾಮ ಪಂಚಾಯತ್ ವ್ಯಾಪ್ತಿಯ ಅರಹಟ್ಟಿ ಮತ್ತು ಕೊಮಗವಾಡ ಗ್ರಾಮಗಳು ೨೦೦೭ ರಲ್ಲಿ ಪ್ರವಾಹದಿಂದ ಮುಳುಗಡೆಯಾಗಿದ್ದು, ಈ ಎರಡು ಗ್ರಾಮಗಳನ್ನು ಸ್ಥಳಾಂತರ ಮಾಡಿದ್ದು. ಆ ಸಂದರ್ಭದಲ್ಲಿದ್ದ, ಎಲ್ಲ ಕುಟುಂಬಗಳಿಗೂ ಮನೆಗಳನ್ನು ಒದಗಿಸಲಾಗಿದ್ದು, ಈಗ ಈ ಎರಡು ಪ್ರದೇಶಗಳಲ್ಲಿ ಸುಮಾರು ೩೫% ರಷ್ಟು ಜನಸಂಖ್ಯೆ ಹೆಚ್ಚಳವಾಗಿರುವುದರ ಬಗ್ಗೆ ಹಾಗೂ ಅಂದಿನ ಅವಿಭಕ್ತ ಕುಟುಂಬಗಳು ಇಂದು ವಿಭಕ್ತ ಕುಟುಂಬಗಳಾಗಿ ವಿಭಜಿತವಾಗಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಪ್ರದೇಶಗಳಲ್ಲಿ ಹೆಚ್ಚಳವಾಗಿರುವ ೩೫% ಜನರಿಗೆ ಹಾಗೂ ವಿಭಕ್ತ ಕುಟುಂಬಗಳಾಗಿ ಸುಮಾರು ಕುಟುಂಬಗಳಿಗೆ ಮನೆಗಳು ಶೌಚಾಲಯಗಳನ್ನೊಳಗೊಂಡಂತೆ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಒಂದು ವೇಳೆ ಕುಟುಂಬಗಳಿಗೆ ಮನೆಗಳು ಶೌಚಾಲಯಗಳನ್ನೊಳಗೊಂಡಂತೆ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸದೇ ಇದ್ದಲ್ಲಿ ಇದಕ್ಕೆ ಕಾರಣಗಳೇನು ; ಈ ಕುರಿತು ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು?

## ಕೃಷ್ಣಾ ನದಿ ನೀರನ್ನು ಬಳಸಿಕೊಳ್ಳುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೦ (೧೦೩೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕರ್ನಾಟಕದ ಜೀವ ನದಿಯಾದ ಕೃಷ್ಣಾಕೊಳ್ಳದಲ್ಲಿ 'ಬಿ'ಸ್ಕೀಮ್‌ನಡಿ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರನ್ನು ಬಳಸಿಕೊಳ್ಳುವಲ್ಲಿ ವಿಳಂಬವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, 'ಬಿ'ಸ್ಕೀಮ್‌ನಡಿ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರಿನ ಪ್ರಮಾಣವೆಷ್ಟು; ಈ ನೀರನ್ನು ಬಳಸಿಕೊಳ್ಳಲು ಸರ್ಕಾರವು ಯಾವ ಯಾವ ಯೋಜನೆಗಳನ್ನು ಕೈಗೊಳ್ಳುವ ಕುರಿತು ಕ್ರಿಯಾ ಯೋಜನೆ ತಯಾರಿಸಿದೆ ;

(ಇ) ಕ್ರಿಯಾ ಯೋಜನೆ ತಯಾರಿಸಿದ್ದಲ್ಲಿ, ಅದಕ್ಕೆ ತಗಲುವ ವೆಚ್ಚವೆಷ್ಟು ; ಈಗಾಗಲೇ ಎಷ್ಟು ಅನುದಾನವನ್ನು ಕೃಷ್ಣಾಕೊಳ್ಳದ ಯೋಜನೆಗಳಿಗೆ ಕಾಯ್ದಿರಿಸಲಾಗಿದೆ;

(ಈ) ಕೃಷ್ಣಾ ನದಿ ಕೊಳ್ಳದಲ್ಲಿ ರಾಜ್ಯದ ಪಾಲಿನ ನೀರನ್ನು ಬಳಸಿಕೊಳ್ಳಲು ಸರ್ಕಾರವು ೨೦೧೩-೧೪, ೨೦೧೪-೧೫, ೨೦೧೫-೧೬ನೇ ಸಾಲಿನಲ್ಲಿ ಕೈಗೊಂಡ ವಿವಿಧ ನೀರಾವರಿ ಯೋಜನೆಗಳಾವುವು ; ಅವುಗಳಿಗೆ ಎಷ್ಟು ಅನುದಾನ ಕಾಯ್ದಿರಿಸಲಾಗಿತ್ತು ; ಅದರಲ್ಲಿ ಬಳಕೆಯಾದ ಅನುದಾನವೆಷ್ಟು ; ಉಳಿಕೆಯಾದ ಅನುದಾನವೆಷ್ಟು ; ವರ್ಷವಾರು ವಿವರ ನೀಡುವುದು ಹಾಗೂ ಇದರಿಂದ ಎಷ್ಟು ಹೆಕ್ಟೇರ್ ಪ್ರದೇಶವು ನೀರಾವರಿಗೆ ಒಳಪಟ್ಟಿರುತ್ತದೆ ;

(ಉ) ಈ ರಾಜ್ಯಕ್ಕೆ ಹಂಚಿಕೆಯಾದ ಪಾಲಿನ ನೀರನ್ನು ಪೂರ್ಣ ಪ್ರಮಾಣದಲ್ಲಿ ಯಾವ ಕಾಲಮಿತಿಯೊಳಗೆ ಬಳಸಿಕೊಳ್ಳಲು ಕ್ರಮ ಕೈಗೊಳ್ಳುವಿರಿ ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500